# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ವಕಾಂಕ್ಷಿ (Aspiration) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಕೆರೆಗಳ ಹೂಳೆತ್ತುವ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಕೃಇ 163 ಕೃಯೋಕಾ 2018 ದಿನಾಂಕ 14.01.2019.
2. ಪತ್ರ ಸಂಖ್ಯೆ: ಕೃಇ 163 ಕೃಯೋಕಾ 2018 ದಿನಾಂಕ 04.02.2019.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 57 ಕೃಯೋಕಾ 2019 ದಿನಾಂಕ 07.08.2019.
4. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂಖ್ಯೆ: ಉಕೃನಿ/ಸಾಕೃಫ/ಅನುದಾನ ವರ್ಗಾವಣೆ/ಹೂಕಾ/2019 ದಿನಾಂಕ 09.07.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಕಾಂಕ್ಷಿ (ಆಸ್ಪಿರೇಷನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಮಹಾರಾಷ್ಟ್ರ ಮಾದರಿಯಲ್ಲಿ ಭಾರತೀಯ ಜೈನ ಸಂಘಟನಾ (ಬಿ.ಜೆ.ಎಸ್) ಸಂಸ್ಥೆ, ಪುಣೆ, ಮಹಾರಾಷ್ಟ್ರ ಇವರ ಸಹಯೋಗದೊಂದಿಗೆ ಉಭಯ ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ಸದರಿ ಕಾರ್ಯಕ್ರಮವನ್ನು ರೂ.10.00 ಕೋಟಿಗಳ ವೆಚ್ಚದ ಮಿತಿಯೊಳಗೆ ಅನುಷ್ಠಾನಗೊಳಿಸಲು ಸರ್ಕಾರ ಅನುಮೋದನೆ ನೀಡಿ, ಈ ಕಾರ್ಯಕ್ರಮದ ನೋಡಲ್ ಅಧಿಕಾರಿಯನ್ನಾಗಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರನ್ನು ನೇಮಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ, ಈ ಕಾರ್ಯಕ್ರಮದ ಅನುಷ್ಠಾನಕ್ಕೆ 2019-20ನೇ ಸಾಲಿನ ಕೃಷಿ ಇಲಾಖೆ ಲೆಕ್ಕ ಶೀರ್ಷಿಕೆ: 2401-00-102-0-28ರ ಉ.ಶೀ-059 ರಡಿ ಉಳಿಕೆಯಾಗಿರುವ ಮೊತ್ತದಲ್ಲಿ ರೂ.200.00 ಲಕ್ಷಗಳ ಕಾರ್ಯಕ್ರಮದ ನೋಡಲ್ ಅಧಿಕಾರಿಯವರಿಗೆ ಬಿಡುಗಡೆ ಮಾಡಲು ಕೃಷಿ ಆಯುಕ್ತರವರಿಗೆ ಆದೇಶಿಸಿದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ, ಕೃಷಿ ಇಲಾಖೆಯ 2019-20ನೇ ಸಾಲಿನ ಚಾಲ್ತಿ ಯೋಜನೆಗಳಲ್ಲಿ ಮುಂದುವರೆಸಲಾಗಿರುವ ರಾಜ್ಯವಲಯದ ಒಟ್ಟು 13 ಯೋಜನಾ ಕಾರ್ಯಕ್ರಮಗಳಿಗೆ ಎರಡನೇ ತ್ರೈಮಾಸಿಕಕ್ಕೆ ಆಯವ್ಯಯ ಲೆಕ್ಕ ಶೀರ್ಷಿಕೆಯಡಿ ಒದಗಿಸಲಾದ ಅನುದಾನದಲ್ಲಿ ಒಟ್ಟು ರೂ.52886.57 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಕಾಂಕ್ಷಿ (ಆಸ್ಪಿರೇಷನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಮಹಾರಾಷ್ಟ್ರ ಮಾದರಿಯಲ್ಲಿ ಭಾರತೀಯ ಜೈನ ಸಂಘಟನಾ (ಬಿ.ಜೆ.ಎಸ್) ಸಂಸ್ಥೆ, ಪುಣೆ ಇವರ ಸಹಯೋಗದೊಂದಿಗೆ ಅನುಷ್ಠಾನಗೊಳಿಸುವ ಕಾರ್ಯಕ್ರಮಕ್ಕೆ ಅನುದಾನವನ್ನು 2019-20ನೇ ಸಾಲಿನ ಸಾವಯವ ಕೃಷಿ ಹಾಗೂ ಸಿರಿಧಾನ್ಯ ಕಾರ್ಯಕ್ರಮದಡಿ ಲೆಕ್ಕ ಶೀರ್ಷಿಕೆ: 2401-00-104-0-12ರ ಉ.ಶೀ-059 ರಡಿ ಉಳಿಕೆಯಾಗಬಹುದಾದ ರೂ.200.00 ಲಕ್ಷಗಳನ್ನು ಸದರಿ ಕಾರ್ಯಕ್ರಮಕ್ಕೆ ವರ್ಗಾಯಿಸಬಹುದಾಗಿದೆ ಎಂಬ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಶವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 163 ಕೃಯೋಕಾ 2018, ಬೆಂಗಳೂರು, ದಿನಾಂಕ 21.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಕಾಂಕ್ಷಿ (ಆಸ್ಪಿರೇಷನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಮಹಾರಾಷ್ಟ್ರ ಮಾದರಿಯಲ್ಲಿ ಭಾರತೀಯ ಜೈನ ಸಂಘಟನಾ (ಬಿ.ಜೆ.ಎಸ್) ಸಂಸ್ಥೆ, ಪುಣೆ, ಮಹಾರಾಷ್ಟ್ರದ ಸರ್ಕಾರೇತರ ಸಂಸ್ಥೆಯ ಸಹಯೋಗದೊಂದಿಗೆ 2019–20ನೇ ಸಾಲಿನ ಕೆರೆ ಹೂಳೆತ್ತುವ ಕಾರ್ಯಕ್ರಮದ ವಾಹನಗಳ ಇಂಧನ ವೆಚ್ಚ ಭರಿಸಲು ಕೃಷಿ ಇಲಾಖೆಯ "ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಯೋಜನೆ" ಲೆಕ್ಕ ಶೀರ್ಷಿಕೆ: 2401-00-104-0-12ರ ಉ.ಶೀ–059 ರಡಿ ಉಳಿಕೆಯಾಗಬಹುದಾದ ರೂ.200.00 ಲಕ್ಷಗಳ ಅನುದಾನವನ್ನು, ಈ ಕಾರ್ಯಕ್ರಮದ ನೋಡಲ್ ಅಧಿಕಾರಿಯವರಿಗೆ, ಈಗಾಗಲೇ ಬಿಡುಗಡೆಯಾಗಿರುವ 2019–20ನೇ ಸಾಲಿನ ಎರಡನೇ ತ್ರೈಮಾಸಿಕ ಅನುದಾನದಲ್ಲಿ ಆದ್ಯತೆ ಮೇರೆಗೆ ಬಿಡುಗಡೆಗೊಳಿಸಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 575 ವೆಚ್ಚ–4/2019 ದಿನಾಂಕ 17–08–2019 ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019 ದಿನಾಂಕ 04–07–2019 ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

21/8/19

ಇವರಿಗೆ:–

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು, (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು–01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು–01.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
8. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
9. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ–4, ಆರ್ಥಿಕ ಇಲಾಖೆ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ